<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ:-ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತವು ಹುಡ್ಕೋದಿಂದ ಪಡೆದ ಸಾಲಕ್ಕೆ 2007ನೇ ನವೆಂಬರ್‌ಗೆ ಕೊನೆಗೊಳ್ಳುವ ತ್ರೈಮಾಸಿಕಕ್ಕೆ ಬಡ್ಡಿ ಪಾವತಿಸಲು ಹಣ ಬಿಡುಗಡೆ ಬಗ್ಗೆ.

ಓದಲಾಗಿದೆ:-ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ಪತ್ರ ಸಂಖ್ಯೆ.ಕೆಆರ್‌ಡಿಸಿಎಲ್/ಎಫ್‌ಡಿ/ಎಂ.ಡಿ/2176/07-08 ದಿನಾಂಕ 03-11-2007.

<u>ಪ್ರಸ್ತಾವನೆ:-</u>

ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮವು ಕೈಗೊಳ್ಳುತ್ತಿರುವ ಯೋಜನೆಗಳಿಗಾಗಿ ಹುಡ್ಕೋದಿಂದ ಪಡೆದ ಸಾಲವು ಈವರೆಗೆ ಒಟ್ಟು 622.80 ಕೋಟಿ ರೂ.ಗಳು ಬಾಕಿ ಇರುತ್ತದೆ. ಓದಲಾದ ದಿನಾಂಕ 03-11-2007ರ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಪತ್ರದಲ್ಲಿ, 2007 ನೇ ನವೆಂಬರ್‌ಗೆ ಕೊನೆಗೊಳ್ಳುವ ತ್ರೈಮಾಸಿಕಕ್ಕೆ ಸಾಲದ ಮರುಪಾವತಿಗೆ 18598ರ ಸ್ಕೀಂನಡಿ ದಿನಾಂಕ 30-09-2007 ರ ಅಂತ್ಯಕ್ಕೆ ಬಾಕಿ ಇರುವ ರೂ.134.63 ಕೋಟಿಗಳ ಮೊತ್ತದ ಮೇಲಿನ ಬಡ್ಡಿಯು ರೂ.3,68,70,625/ ಗಳಾಗಿದ್ದು (ಮೂರು ಕೋಟಿ ಅರವತ್ತೆಂಟು ಲಕ್ಷ ಎಪ್ಪತ್ತು ಸಾವಿರದ ಆರುನೂರ ಇಪ್ಪತ್ತೈದು ರೂಪಾಯಿಗಳು ಮಾತ್ರ) ಹುಡ್ಕೋಗೆ ಪಾವತಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

<u>ಸರ್ಕಾರದ ಆದೇಶ ಸಂಖ್ಯೆ. ಲೋಇ 53 ಇಎಪಿ 2007 ಬೆಂಗಳೂರು, ದಿನಾಂಕ 30-11-2007</u>

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಹುಡ್ಕೋದಿಂದ ತೆಗೆದುಕೊಂಡಿರುವ ಸಾಲದ ಬಾಬತ್ತಿಗೆ 2007 ನೇ ನವೆಂಬರ್‌ಗೆ ಕೊನೆ ಗೊಳ್ಳುವ ತ್ರೈಮಾಸಿಕ ಅವಧಿಗೆ ಬಡ್ಡಿ ಮೊತ್ತ ರೂ.3,68,70,625.00/- ಗಳನ್ನು (ಮೂರು ಕೋಟಿ ಅರವತ್ತೆಂಟು ಲಕ್ಷ ಎಪ್ಪತ್ತು ಸಾವಿರದ ಆರುನೂರ ಇಪ್ಪತ್ತೈದು ರೂಪಾಯಿಗಳು ಮಾತ್ರ) ಲೆಕ್ಕಶೀರ್ಷಿಕೆ "5054-80-190-0-01-240 (ಯೋಜನೇತರ) ಸಾಲ ಮೇಲುಸ್ತುವಾರಿ" ರ ಅಡಿಯಲ್ಲಿ ಬಿಡುಗಡೆ ಮಾಡಲು ಆದೇಶಿಸಲಾಗಿದೆ.

ಸದರಿ ಬಿಲ್ಲಿನ ಮೊತ್ತಕ್ಕೆ ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ) ಇವರ ಮೇಲುರುಜು ಮಾಡಿಸುವುದು ಹಾಗೂ ಈ ಬಿಲ್ಲನ್ನು (ಸ್ವೀಕೃತದ ರಶೀದಿ) ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇಲ್ಲಿಂದ ಡ್ರಾ ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ.ಲೋಇ/1065 ಆಕೋ-1/2007 ದಿನಾಂಕ 27-11-2007 ರಲ್ಲಿನ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಭಾರತದ ರಾಷ್ಟ್ರಪತಿಯವರ
ಮತ್ತು ಅವರ

11.07

**ಪ್ರತಿಯನ್ನು:-**

1. ಮಹಾಲೇಖಪಾಲರು (ಅಕೌಂಟ್ಸ್) ಕರ್ನಾಟಕ, ಬೆಂಗಳೂರು
2. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ
3. ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ
4. ಕಾರ್ಯದರ್ಶಿಗಳು, ಯೋಜನಾ ಇಲಾಖೆ
5. ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ, ಬೆಂಗಳೂರು,
7. ಮುಖ್ಯ ಪಾಲಯಾಧಿಕಾರಿ, ಹುಡ್ಕೋ, ಮಣಿಪಾಲ್ ಸೆಂಟರ್, ಬೆಂಗಳೂರು
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ)
9. ಜಂಟಿ ನಿರ್ದೇಶಕರು, ಸ್ಟೇಟ್ ಹುಜೂರ್ ಟ್ರೆಷರಿ, ಕೆ.ಆರ್.ಸರ್ಕಲ್, ಬೆಂಗಳೂರು
10. ಜಂಟಿ ನಿರ್ದೇಶಕರು, ಟಿ.ಎನ್.ಎಮ್.ಸಿ., ಖನಿಜ ಭವನ, ಬೆಂಗಳೂರು
11. ಮುಖ್ಯ ಮಾಹಿತಿ ಅಧಿಕಾರಿ, ಐ.ಡಿ.ಎಸ್.ಸೆಲ್
12. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸಮನ್ವಯ ಶಾಖೆ)
13. ಹೆಚ್ಚುವರಿ ಪ್ರತಿಗಳು